## ಕರ್ನಾಟಕ ಸರ್ಕಾರದ ನಡಾವಳಿಗಳು

ವಿಷಯ:- ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯ ಪರೀಕ್ಷಾ ಶುಲ್ಕ ಪರಿಷ್ಕರಣೆ ಬಗ್ಗೆ.

ಓದಲಾಗಿದೆ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 355 ಎಸ್ಎಲ್‌ಬಿ 2017, ದಿನಾಂಕ:11.06.2020.
2. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ರವರ ಏಕಕಡತ ಸಂಖ್ಯೆ: ಇ2/ಸಾದಿಲ್ವಾರುಬಿಲ್:1(ಎ)/2019-20 ದಿನಾಂಕ: 30.11.2021.

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮಾಂಕ(1)ರಲ್ಲಿ ಸರ್ಕಾರದ ಆದೇಶದಂತೆ ಪ್ರಸ್ತುತ ಪರೀಕ್ಷಾ ಶುಲ್ಕದ ದರಗಳು ಚಾಲ್ತಿಯಲ್ಲಿರುತ್ತದೆ. ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ವಿದ್ಯಾರ್ಥಿಗಳಿಂದ ಪಡೆಯುವ ಪರೀಕ್ಷಾ ಶುಲ್ಕದ ದರಗಳ ಕುರಿತು ಮೇಲೆ ಓದಲಾದ ಕ್ರಮ ಸಂಖ್ಯೆ(2)ರಲ್ಲಿ ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಇವರ ಏಕಕಡತ ಸಂಖ್ಯೆ:ಇ2/ಸಾದಿಲ್ವಾರುಬಿಲ್:1(ಎ)/2019-20ರಂತೆ2019-20ನೇ ಸಾಲಿನಲ್ಲಿ ಕೋವಿಡ್-19ರ ಹಿನ್ನೆಲೆಯಲ್ಲಿ ಪರೀಕ್ಷಾ ಪ್ರಕ್ರಿಯೆಗಳಲ್ಲಿ SOP ಅನುಪಾಲನೆಯಿಂದಾಗಿ ಮಂಡಳಿ ಆಯವ್ಯಯದಲ್ಲಿ ಹಂಚಿಕೆ ಮಾಡಿಕೊಂಡಿದ್ದ ಅನುದಾನಕ್ಕಿಂತ ಒಟ್ಟಾರೆ ಸುಮಾರು 10.61ಕೋಟಿ ರೂಗಳು ಹೆಚ್ಚುವರಿ ವೆಚ್ಚವಾದ ಹಿನ್ನಲೆಯಲ್ಲಿ, ಸದರಿ ವೆಚ್ಚದ ಮೊತ್ತ ಮರುಹೊಂದಾಣಿಕೆಗೊಳಿಸಲು ಹಾಗೂ ಮುಂದಿನ ಸಂಭಾವ್ಯ ವೆಚ್ಚಗಳ ಮುಂಜಾಗ್ರತೆಯಿಂದಾಗಿ 2020-21ನೇಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷಾ ಶುಲ್ಕವನ್ನು ಪ್ರತಿ ವಿದ್ಯಾರ್ಥಿಗೆ ತಲಾ ರೂ.100/-ಗಳನ್ನು ಹೆಚ್ಚಿಸುವ ಸಂಬಂಧ ಮಂಡಳಿಯ ನೇರ ಪಾವತಿ ಮಾಡುವ ವಿದ್ಯಾರ್ಥಿಗಳಿಗೆ ಶುಲ್ಕ ಹೆಚ್ಚಿಸುವುದು ಸೂಕ್ತವಲ್ಲ. ಸದರಿ ಹೆಚ್ಚಳವನ್ನು ಸರ್ಕಾರದ ವಿವಿಧ ಇಲಾಖೆಗಳಿಂದ ಮರುಪಾವತಿಯಾಗುವ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತಗೊಳಿಸಬಹುದು ಎಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ(2)ರಲ್ಲಿ ಪ್ರತಿ ವರ್ಷ ಪರೀಕ್ಷಾ ಶುಲ್ಕವನ್ನು ನೇರವಾಗಿ ಪಾವತಿ ಮಾಡುವ ವಿದ್ಯಾರ್ಥಿಗಳ ಸರಾಸರಿ ಶೇಕಡಾವಾರು ಸಂಖ್ಯೆ: 23% ಆಗಿರುತ್ತದೆ ಹಾಗೂ ಉಳಿದ ಶೇ.77% ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದ ವಿವಿಧ ಇಲಾಖೆಗಳಿಂದ ಮರುಪಾವತಿಯಾಗುತ್ತಿರುತ್ತದೆ. ಕೋವಿಡ್-19ರ ಹಿನ್ನಲೆಯಲ್ಲಿ 2019-20 ಮತ್ತು 2020-21ನೇ ಸಾಲಿನಲ್ಲಿ ಪರೀಕ್ಷಾ ಪ್ರಕ್ರಿಯೆಗಳ SOP ಅನುಪಾಲನೆಯಿಂದಾಗಿ ಭರಿಸಿರುವ ಹೆಚ್ಚುವರಿ ವೆಚ್ಚವನ್ನು ಸರಿದೂಗಿಸಲು, 2021-22ರ ಶೈಕ್ಷಣಿಕ ವರ್ಷದಲ್ಲಿ ಒಂದು ವೇಳೆ ಕೋವಿಡ್-19ರ ಪ್ರತಿಕೂಲ ಸನ್ನಿವೇಶ ಮುಂದುವರೆಯುವ ಸಾಧ್ಯತೆಯನ್ನು ಗಮನದಲ್ಲಿಟ್ಟುಕೊಂಡು ಹಾಗೂ ಪ್ರಸ್ತುತ ಪರೀಕ್ಷಾ ಪ್ರಕ್ರಿಯೆಗಳ ವೆಚ್ಚಗಳು ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ 2021-22ನೇ ಸಾಲಿನಲ್ಲಿ ಪರೀಕ್ಷಾಶುಲ್ಕ ಪರಿಷ್ಕರಿಸಿ ಹೆಚ್ಚಳಮಾಡುವುದು ಅಗತ್ಯವಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ: ಇಡಿ 355 ಎಸ್ಎಲ್‌ಬಿ 2017, ದಿನಾಂಕ:11-06-2020 ರಂತೆ ಶೇ.5%ರಷ್ಟು ಪರೀಕ್ಷಾ ಶುಲ್ಕ ಹೆಚ್ಚಿಸಿದಲ್ಲಿ ಖರ್ಚು-ವೆಚ್ಚ ಸರಿದೂಗಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಎಲ್ಲಾ ವಿಧಧ ವಿದ್ಯಾರ್ಥಿಗಳನ್ನು ಒಳಗೊಂಡಂತೆ ಪ್ರತಿ ವಿದ್ಯಾರ್ಥಿಗೆ ರೂ.100/-ರಂತೆ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪರೀಕ್ಷಾಶುಲ್ಕವನ್ನು ಪರಿಷ್ಕರಿಸಿ ಸರ್ಕಾರದ ಆದೇಶವನ್ನು ಹೊರಡಿಸಲು ಕೋರಿರುತ್ತಾರೆ.

ಮೇಲೆ ವಿವರಿಸಿರುವ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ.

A8 8/6/12/21

A ke 6/12/21 with covel 2248

**ಸರ್ಕಾರದ ಆದೇಶ ಸಂಖ್ಯೆ: ಇಪಿ 189 ಎಸ್ಎಲ್‌ಬಿ 2021,**

**ಬೆಂಗಳೂರು, ದಿನಾಂಕ: 30ನೇ ನವೆಂಬರ್2021**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಇಡಿ 355 ಎಸ್ಎಲ್‌ಬಿ 2017 ದಿನಾಂಕ:11.06.2020ರಲ್ಲಿನ ಭಾಗ (ಎ) ಎಸ್.ಎಸ್.ಎಲ್.ಸಿ ಪರೀಕ್ಷೆಯ ಪರೀಕ್ಷಾ ಶುಲ್ಕದ

ಪರಿಷ್ಕರಣೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಂದ ಪಡೆಯುವ ಪರೀಕ್ಷಾ ಶುಲ್ಕದ ದರವನ್ನುಹೆಚ್ಚಿಸಿ 2021-22ನೇ ಸಾಲಿನ ಪರೀಕ್ಷೆಗೆ ಅನ್ವಯವಾಗುವಂತೆ ಈ ಕೆಳಕಂಡಂತೆ ಆದೇಶಿಸಿದೆ.

| ಕ್ರ.ಸಂ | ವಿದ್ಯಾರ್ಥಿಗಳ ವಿವರ | ಪ್ರಸ್ತುತ ಜಾರಿಯಲ್ಲಿರುವದರರೂ,...ಗಳಲ್ಲಿ | ಪರಿಷ್ಕರಿಸಲಾದ ದರ ರೂ.ಗಳಲ್ಲಿ |
|---|---|---|---|
| ಪ್ರಥಮ ಬಾರಿಗೆ ಹಾಜರಾಗುವ ಶಾಲಾ ವಿದ್ಯಾರ್ಥಿಗಳು / ಖಾಸಗಿ ಅಭ್ಯರ್ಥಿಗಳಿಗೆ ಶುಲ್ಕ | | | |
| 1 | ಎಸ್.ಎಸ್.ಎಲ್.ಸಿ ಪರೀಕ್ಷಾ ಶುಲ್ಕ | 485/- | 585/- |
| 2 | ಲ್ಯಾಮಿನೇಷನ್ ಶುಲ್ಕ | 22/- | 22/- |
| ಪುನರಾವರ್ತಿತ ಶಾಲಾ/ಖಾಸಗಿ ಅಭ್ಯರ್ಥಿಗಳ ಶುಲ್ಕ | | | |
| 3 | ಒಂದು ವಿಷಯಕ್ಕೆ | 320/- | 370/- |
| 4 | ಎರಡು ವಿಷಯಕ್ಕೆ | 386/- | 461/- |
| 5 | ಮೂರು ವಿಷಯ ಹಾಗೂ ಮೂರಕ್ಕಿಂತ ಹೆಚ್ಚಿನ ವಿಷಯಗಳಿಗೆ | 520/- | 620/- |

ಸರ್ಕಾರದ ಆದೇಶ ಸಂಖ್ಯೆ: ಇಡಿ 355 ಎಸ್‌ಎಲ್‌ಬಿ 2017, ದಿನಾಂಕ: 11.06.2020ರ ಭಾಗ (ಎ) ಎಸ್.ಎಸ್.ಎಲ್.ಸಿ ಪರೀಕ್ಷೆಯ ಪರೀಕ್ಷಾ ಶುಲ್ಕದ ಪರಿಷ್ಕರಣೆಯನ್ನು ಹೊರತುಪಡಿಸಿ ಉಳಿದಂತೆ ಯಥಾವತ್ತಾಗಿ ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

V. S. 30/11/2021

(ವಿ. ಶ್ರೀನಿವಾಸಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಪ್ರೌಢ)

ಪ್ರತಿ:

1. ಪ್ರಧಾನ ಮಹಾಲೇಖಪಾಲರು-ಕರ್ನಾಟಕ (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
3. ನಿರ್ದೇಶಕರು (ಪ್ರೌಢಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
4. ನಿರ್ದೇಶಕರು (ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
5. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ.
6. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ (ಸಂಬಂಧಿಸಿದ ಉಪ ನಿರ್ದೇಶಕರ ಮುಖಾಂತರ)
7. ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿಗಳು.